# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 31 (72) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 13.02.2024 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕಲ್ಯಾಣ ಕರ್ನಾಟಕ ಭಾಗದ ವ್ಯಾಪ್ತಿಗೆ ಬರುವ ಯಾವ ಯಾವ ಜಿಲ್ಲೆಗಳಲ್ಲಿ ಯಾವ ಯಾವ ಕೈಗಾರಿಕೆಗಳನ್ನು ಸ್ಥಾಪಿಸಲು ಯೋಜನೆಗಳನ್ನು ರೂಪಿಸಲಾಗಿದೆ; | ಕೈಗಾರಿಕೆಗಳ ಸಮತೋಲಿತ ಮತ್ತು ಸುಸ್ಥಿರ ಅಭಿವೃದ್ಧಿಗಾಗಿ ಕೈಗಾರಿಕಾ ನೀತಿ 2020-25 ನ್ನು ಜಾರಿಗೆ ತರಲಾಗಿದೆ. ಅದರಂತೆ ಕಲ್ಯಾಣ ಕರ್ನಾಟಕ ಭಾಗದ ಕಲಬುರಗಿ, ಬೀದರ್, ಯಾದಗಿರಿ, ಕೊಪ್ಪಳ, ರಾಯಚೂರು & ಬಳ್ಳಾರಿ 6 ಜಿಲ್ಲೆಗಳನ್ನು ವಲಯ-1 ರಡಿ ಪರಿಗಣಿಸಿದ್ದು, ಈ ಜಿಲ್ಲೆಗಳಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಹೆಚ್ಚಿನ ರಿಯಾಯಿತಿ ಮತ್ತು ಪ್ರೋತ್ಸಾಹಗಳ ಉತ್ತೇಜನ ನೀಡಲಾಗುತ್ತಿದೆ.<br><br>ಯಾದಗಿರಿ ಜಿಲ್ಲೆ ಕಡೆಚೂರು ಕೈಗಾರಿಕಾ ಪ್ರದೇಶದಲ್ಲಿ ಫಾರ್ಮಾ ಪಾರ್ಕ್ ಸ್ಥಾಪಿಸಲು ಭೂಮಿ ಮೀಸಲಿಟ್ಟು ಬಹಳಷ್ಟು ಕೈಗಾರಿಕೆಗಳಿಗೆ ಅನುಮೋದನೆ ನೀಡಲಾಗಿದೆ.<br><br>ಕೊಪ್ಪಳ ಜಿಲ್ಲೆಯಲ್ಲಿ ಗೊಂಬೆ ತಯಾರಿಕೆ, ಬಳ್ಳಾರಿ ಜಿಲ್ಲೆಯಲ್ಲಿ ಜವಳಿ ಉತ್ಪನ್ನಗಳು ಹಾಗೂ ಬೀದರ್ ಜಿಲ್ಲೆಯಲ್ಲಿ ಕೃಷಿ ಉಪಕರಣಗಳು ತಯಾರಿಕೆಗೆ ಕೈಗಾರಿಕಾ ಕ್ಲಸ್ಟರ್ ಗಳ ಅಭಿವೃದ್ಧಿಗೆ ಅನುಮೋದನೆ ನೀಡಲಾಗಿದೆ ಈ ಕ್ಲಸ್ಟರ್ ಗಳಲ್ಲಿ ಅನುಷ್ಠಾನಗೊಳ್ಳುವ ಕೈಗಾರಿಕೆಗಳಿಗೆ ವಿಶೇಷ ಪ್ರೋತ್ಸಾಹಧನ ಪ್ಯಾಕೇಜ್ ಗಳನ್ನು ನೀಡಿ ಉತ್ತೇಜಿಸಲಾಗುತ್ತದೆ.<br><br>ಕಲಬುರಗಿ ಜಿಲ್ಲೆಯಲ್ಲಿ ಖಾಸಗಿ ಸಿಮೆಂಟ್ ಮತ್ತು ಸಕ್ಕರೆ ಕೈಗಾರಿಕೆ ಸ್ಥಾಪಿಸಲು ಅನುಮೋದನೆ ನೀಡಲಾಗಿದೆ. |
| ಆ | ಕಲಬುರಗಿ ಜಿಲ್ಲೆಯಲ್ಲಿ "ಮೆಗಾ ಟೆಕ್ಸ್ ಟೈಲ್ ಪಾರ್ಕ್"ನ್ನು ಸ್ಥಾಪಿಸುವ ಯೋಜನೆಯು ಯಾವ ಹಂತದಲ್ಲಿದೆ; ಈ ಯೋಜನೆಗೆ ಮೀಸಲಿಟ್ಟ ಹಾಗೂ ಇದುವರೆಗೂ ಬಿಡುಗಡೆಯಾದ ಅನುದಾನ ಎಷ್ಟು; | ಕಲಬುರಗಿ ಜಿಲ್ಲೆಯಲ್ಲಿ "ಮೆಗಾ ಟೆಕ್ಸ್‌ಟೈಲ್ ಪಾರ್ಕ್"ನ್ನು ಸ್ಥಾಪಿಸುವ ಯೋಜನೆಯ ಪ್ರಗತಿ ವಿವರವನ್ನು **ಅನುಬಂಧ-1**ರಲ್ಲಿ ಒದಗಿಸಿದೆ.<br><br>PM-MITRA Park ಯೋಜನೆಯಡಿ ನಿರ್ಮಿತವಾಗಲಿರುವ ಪಾರ್ಕ್‌ನ್ನು 02 ಹಂತಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕೇಂದ್ರ ಸರ್ಕಾರವು ಒಟ್ಟು ರೂ.500 ಕೋಟಿಗಳ ಅನುದಾನವನ್ನು ಒದಗಿಸಲಿದೆ ಹಾಗೂ ಇದುವರೆಗೂ ಯಾವುದೇ ಅನುದಾನ ಬಿಡುಗಡೆ ಯಾಗಿರುವುದಿಲ್ಲ. |
| ಇ | "ಮೆಗಾ ಟೆಕ್ಸ್ ಟೈಲ್ ಪಾರ್ಕ್"ನ್ನು ಕಲಬುರಗಿ ಜಿಲ್ಲೆಯ ಯಾವ ಸ್ಥಳದಲ್ಲಿ ಸ್ಥಾಪಿಸಲು ಯೋಜನೆಯನ್ನು ರೂಪಿಸಲಾಗಿದೆ; ಈ ಯೋಜನೆಯ ರೂಪುರೇಷೆಯ ಸಂಪೂರ್ಣ ವಿಸ್ತೃತ ವರದಿಯನ್ನು ನೀಡುವುದು; | "ಮೆಗಾ ಟೆಕ್ಸ್‌ಟೈಲ್ ಪಾರ್ಕ್"ನ್ನು ಕಲಬುರಗಿ ಜಿಲ್ಲೆಯ ಕಲಬುರಗಿ ತಾಲ್ಲೂಕಿನ ಕಿರಣಗಿ, ನದಿಸಿನ್ನೂರು ಹಾಗೂ ಫಿರೋಜಾಬಾದ್ ಗ್ರಾಮಗಳ ವಿವಿಧ ಸರ್ವೆ ನಂಬರುಗಳಡಿ 1000 ಎಕರೆ ಪ್ರದೇಶದಲ್ಲಿ ಸ್ಥಾಪಿಸಲು ಯೋಜನೆಯನ್ನು ರೂಪಿಸಲಾಗಿದೆ.<br><br>ಈ ಯೋಜನೆಯ ರೂಪುರೇಷೆಯ ಸಂಪೂರ್ಣ ವಿಸ್ತೃತ ವರದಿಯನ್ನು **ಅನುಬಂಧ-2**ರಲ್ಲಿ ಒದಗಿಸಿದೆ. |

| | | |
|---|---|---|
| ಈ | ಈ ಯೋಜನೆಗೆ ಇದುವರೆಗೆ ಎಷ್ಟು ಪ್ರಮಾಣದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ? | ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಆದೇಶ ಸಂಖ್ಯೆ. ಎನರ್ಜಿ 210 ಇಇಬಿ 2022, ಬೆಂಗಳೂರು, ದಿನಾಂಕ 03.08.2022 ರನ್ವಯ ಕಲ್ಬುರ್ಗಿಯಲ್ಲಿ ಇಂಧನ ಇಲಾಖೆಯ Power Company of Karnataka Ltd. ನ ಅಧೀನದಲ್ಲಿರುವ 1551 ಎಕರೆ ಭೂಮಿಯಲ್ಲಿ 1000 ಎಕರೆ ಜಮೀನನ್ನು ಜವಳಿ ಪಾರ್ಕ್ ಅನುಷ್ಠಾನಗೊಳಿಸುವ ಸಲುವಾಗಿ ಕೈಮಗ್ಗ ಮತ್ತು ಜವಳಿ ಇಲಾಖೆಗೆ ಹಸ್ತಾಂತರಿಸಲು ಆದೇಶವಾಗಿರುತ್ತದೆ. |

ಸಿಐ 49 ಎಸ್‌ಪಿಐ 2024

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು

## ವಿಧಾನ ಪರಿಷತ್ತಿನ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ. 31(72)ರ ಅನುಬಂಧ-1

- ಕಲಬುರಗಿ ಜಿಲ್ಲೆಯ ಕಲಬುರಗಿ ತಾಲ್ಲೂಕಿನ ಕಿರಣಗಿ, ನದಿಸಿನ್ನೂರು ಹಾಗೂ ಫಿರೋಜಾಬಾದ್ ಗ್ರಾಮಗಳ ವಿವಿಧ ಸರ್ವೆ ನಂಬರ್‌ಗಳಡಿ 1000 ಎಕರೆಯಲ್ಲಿ ಕೆಂದ್ರ ಹಾಗೂ ರಾಜ್ಯ ಸರ್ಕಾರದ ಒಡೆತನದಲ್ಲಿ ರಚನೆಯಾಗಲಿರುವ SPV ಮುಖಾಂತರ ಮೆಗಾ ಜವಳಿ ಪಾರ್ಕ್‌ನ್ನು ಸ್ಥಾಪಿಸಲು ದಿನಾಂಕ 17.03.2023 ರಂದು ಘೋಷಿಸಿದ್ದು, ದಿನಾಂಕ 28.03.2023 ರಂದು ಪಾರ್ಕ್ ಸ್ಥಾಪನೆಗೆ ಚಾಲನೆ ನೀಡಲಾಗಿರುತ್ತದೆ.

- ಸದರಿ ಜವಳಿ ಪಾರ್ಕ್ ಸ್ಥಾಪನೆಗೆ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಸ್ಥಾಪಿಸಲು Master Developer ಅನ್ನು ಗುರುತಿಸಲು Consultant (Transaction Advisor) ಅನ್ನು ನೇಮಿಸಿಕೊಳ್ಳಲಾಗಿದೆ.

- ಸರ್ಕಾರದ ಆದೇಶ ಸಂಖ್ಯೆ. ಎನರ್ಜಿ 210 ಇಇಬಿ 2022, ದಿನಾಂಕ 03.08.2022 ರಲ್ಲಿನ ಕೆಲವು ಷರತ್ತುಗಳನ್ನು ಕೈಬಿಟ್ಟು ತಿದ್ದುಪಡಿ ಆದೇಶ ಹೊರಡಿಸುವಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ಇವರನ್ನು ಕೋರುವಂತೆ ಜವಳಿ ಅಭಿವೃದ್ಧಿ ಆಯುಕ್ತರು ವಿನಂತಿಸಿದ್ದು, ಪ್ರಸ್ತಾವನೆಯು ಇಂಧನ ಇಲಾಖೆಯ ಪರಿಷ್ಕೃತ ಆದೇಶ ಹೊರಡಿಸುವ ಪರಿಶೀಲನೆಯಲ್ಲಿರುತ್ತದೆ.

- PM-MITRA ಮೆಗಾ ಜವಳಿ ಪಾರ್ಕ್‌ನ Special Purpose Vehicle (SPV) ಅನ್ನು ನೂತನವಾಗಿ ಕಂಪನಿ ಕಾಯ್ದೆ ಅನುಸಾರ ರಚನೆ ಮಾಡಲು ಹಾಗೂ ನೊಂದಾಯಿಸಲು ಕ್ರಮ ವಹಿಸಲಾಗಿದೆ. SPV ಕಂಪನಿಯಲ್ಲಿ ರಾಜ್ಯ ಸರ್ಕಾರದ ಷೇರು ಬಂಡವಾಳ ಶೇ.51ರಷ್ಟು ಹಾಗೂ ಕೇಂದ್ರ ಸರ್ಕಾರದ ಷೇರು ಬಂಡವಾಳ ಶೇ.49 ರ ಅನುಪಾತದಲ್ಲಿ ಹೂಡಬೇಕಾಗಿರುತ್ತದೆ.

- ಪಾರ್ಕ್‌ನ್ನು 02 ಹಂತಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕೇಂದ್ರ ಸರ್ಕಾರವು ರೂ.500.00 ಕೋಟಿಗಳ ಅನುದಾನ ಒದಗಿಸಲಿದೆ.

- ರಾಜ್ಯ ಸರ್ಕಾರವು SPV ಗೆ ಸಾಂಕೇತಿಕ ದರದಲ್ಲಿ 1000 ಎಕರೆ ಜಮೀನನ್ನು (99 ವರ್ಷಗಳ ಅವಧಿಗೆ ಪ್ರತಿ ಎಕರೆಗೆ ರೂ.1 ರಂತೆ) ಹಸ್ತಾಂತರಿಸಲಿದೆ.

## ವಿಧಾನ ಪರಿಷತ್ತಿನ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ. 31(72)ರಅನುಬಂಧ-2

**ರಾಜ್ಯದಲ್ಲಿ ಕೇಂದ್ರ ಸರ್ಕಾರದ ನೆರವಿನೊಂದಿಗೆ ನಿರ್ಮಿಸುವ PM-MITRA Park, ಕಲಬುರಗಿ ಯೋಜನೆಯ ರೂಪುರೇಷೆಗಳು.**

- ಈ ಯೋಜನೆಯು ಎಲ್ಲಾ ಜವಳಿ ಮೌಲ್ಯ ಸರಪಳಿಯನ್ನು ಒಂದೇ ಸ್ಥಳದಲ್ಲಿ ಸ್ಥಾಪಿಸುವ ಮೂಲ ಕಲಾಜಿಸ್ಟಿಕ್ಸ್ ವೆಚ್ಚವನ್ನು ಕಡಿಮೆ ಮಾಡಿ, ಹೂಡಿಕೆಯನ್ನು ಆಕರ್ಷಿಸಿ, ಉತ್ಪಾದನೆ, ಉದ್ಯೋಗ ಮತ್ತು ರಫ್ತು ಸಾಮರ್ಥ್ಯವನ್ನು ಹೆಚ್ಚಿಸುವುದು.

- ಜವಳಿ ಉದ್ಯಮದ ಎಲ್ಲಾ ಮೌಲ್ಯ ಸರಪಳಿಯನ್ನೊಳಗೊಂಡ ಸಮಗ್ರ ದೊಡ್ಡ ಪ್ರಮಾಣದ ಮತ್ತು ಆಧುನಿಕ ಕೈಗಾರಿಕಾ ಮೂಲಸೌಕರ್ಯ ಸೌಲಭ್ಯವನ್ನು ಅಭಿವೃದ್ಧಿಪಡಿಸುವುದು.

- ಈ ಯೋಜನೆಯು ಜಾಗತಿಕ ಜವಳಿ ಮಾರುಕಟ್ಟೆಯಲ್ಲಿ ಕರ್ನಾಟಕವನ್ನು ಸ್ಪರ್ಧಾತ್ಮಕ ರಾಜ್ಯವನ್ನಾಗಿಸಲು ಹೂಡಿಕೆಗಳನ್ನು ಆಕರ್ಷಿಸಲು ಹಾಗೂ ಉದ್ಯೋಗಗಳನ್ನು ಸೃಜಿಸುವ ಗುರಿ ಹೊಂದಿದೆ.

- ಸುಸ್ಥಿರ ಕೈಗಾರೀಕರಣದ ಉತ್ತೇಜನೆ, ನಾವಿನ್ಯ ಅನ್ವೇಷಣೆ ಹಾಗೂ ಸ್ಥಿತಿ ಸ್ಥಾಪಕ ಮೂಲಸೌಕರ್ಯವನ್ನು ನಿರ್ಮಿಸುವುದು.

- ಕಲಬುರಗಿಯಲ್ಲಿ PM-MITRA ಪಾರ್ಕ್ ಅನ್ನು 5F Vision (Farm to Fibre to Factory to Fashion to Foreign) ಉದ್ದೇಶದೊಂದಿಗೆ 1000 ಎಕರೆ ಪ್ರದೇಶದಲ್ಲಿ ಸ್ಥಾಪಿಸಲಾಗುತ್ತಿದೆ.

- ಸದರಿ ಪಾರ್ಕ್‌ನಲ್ಲಿ ವಿವಿಧ ಜವಳಿ ಕೈಗಾರಿಕೆಗಳ ಸ್ಥಾಪನೆಗೆ ಅಗತ್ಯವಿರುವ ವಿದ್ಯುತ್, ನೀರು, ಒಳಚರಂಡಿ ವ್ಯವಸ್ಥೆ, ರಸ್ತೆಗಳು, ಸಿ.ಇ.ಟಿ.ಪಿ ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು.

- ಸದರಿ ಪಾರ್ಕ್‌ನಲ್ಲಿ ಸಮಗ್ರ ಜವಳಿ ಮೌಲ್ಯ ಸರಪಳಿ (Textile Value Chain) ಯಲ್ಲಿ ಸ್ಪಿನ್ನಿಂಗ್, ವೀವಿಂಗ್, ಪ್ರೊಸೆಸಿಂಗ್, ಪ್ರಿಂಟಿಂಗ್, ಗಾರ್ಮೆಂಟಿಂಗ್, ಟೆಕ್ನಿಕಲ್ ಟೆಕ್ಸ್ ಟೈಲ್ ಘಟಕಗಳ ಸ್ಥಾಪನೆಗೆ ಅವಕಾಶವಿರುತ್ತದೆ.

- ಪಾರ್ಕ್ ಸ್ಥಾಪನೆಯ ನಂತರ ರೂ.10,000 ಕೋಟಿ ಬಂಡವಾಳ ಹೂಡಿಕೆ ಆಗುವ ನಿರೀಕ್ಷೆ ಇದ್ದು, ಕಲ್ಯಾಣ ಕರ್ನಾಟಕದ 1 ಲಕ್ಷ ಯುವಕ / ಯುವತಿಯರಿಗೆ ನೇರ ಉದ್ಯೋಗ ಮತ್ತು 2 ಲಕ್ಷ ಪರೋಕ್ಷ ಉದ್ಯೋಗ ಸೃಷ್ಟಿಯಾಗಲಿದೆ.